2472

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1005(1211)
ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್, (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 29.12.2022
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕಳೆ 3 ವರ್ಷಗಳಲ್ಲಿ ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐ.ಪಿ.ಎಸ್ ಅಧಿಕಾರಿಗಳಿಗೆ ಇಲಾಖಾ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಎಷ್ಟು ನೋಟೀಸ್ ನೀಡಲಾಗಿದೆ; ಎಷ್ಟು ಐಪಿಎಸ್ ಅಧಿಕಾರಿಗಳು ಇಲಾಖಾ ವಿಚಾರಣೆಗೆ ಹಾಜರಾಗಿ ತಮ್ಮ ವಿವರಣೆಯನ್ನು ನೀಡಿದ್ದಾರೆ; ಯಾವುದೇ ರೀತಿಯ ವಿಚಾರಣೆಗೆ ಹಾಜರಾಗದೇ ಇರುವ ಐಪಿಎಸ್ ಅಧಿಕಾರಿಯ ಮೇಲೆ ಇಲಾಖಾ ವಿಚಾರಣೆಗೆ ಹಾಜರಾಗುವ ಸರ್ಕಾರದ ಆದೇಶವನ್ನು ಉಲ್ಲಂಘಿಸಿರುವ ಕಾರಣಕ್ಕಾಗಿ ಅಮಾನತ್ತು ಮಾಡದಿರಲು ಕಾರಣವೇನು; | ಐ.ಎಂ.ಎ ಪ್ರಕರಣದಲ್ಲಿ ಇಬ್ಬರು ಐಪಿಎಸ್ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಲಾಗಿದ್ದು, ಇಬ್ಬರು ಅಧಿಕಾರಿಗಳು ವಿಚಾರಣೆಗೆ ಹಾಜರಾಗುತ್ತಿದ್ದಾರೆ. |
| ಆ) | ಸಾಕಷ್ಟು ಅವಕಾಶಗಳನ್ನು ನೀಡಿದ ಬಳಿಕವು ಇಲಾಖಾ ವಿಚಾರಣೆಗೆ ಹಾಜರಾಗದಿರುವ ಐಪಿಎಸ್ ಅಧಿಕಾರಿಯ ವಿರುದ್ಧ ಏಕಪಕ್ಷೀಯವಾಗಿ ವರದಿ ನೀಡುವಂತೆ ವಿಚಾರಣಾಧಿಕಾರಿಗೆ ಸರ್ಕಾರ ಸೂಚಿಸದಿರಲು ಕಾರಣವೇನು' ಭ್ರಷ್ಟ ಹಾಗೂ ಕರ್ತವ್ಯದಲ್ಲಿ ನಿರ್ಲಕ್ಷತನ ಹಾಗೂ ಸರ್ಕಾರದ ಆದೇಶವನ್ನು ಪಾಲಿಸದೆ ಇರುವ ಇಂತಹ ಅಧಿಕಾರಿಗಳ ಸೇವೆಯು ಸರ್ಕಾರಕ್ಕೆ ಅವಶ್ಯಕವಾಗಿದೆಯೇ; ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು) | ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ |
| ಇ) | ತನಿಖಾ ಸಂಸ್ಥೆಯು ಐಎಂಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದೆ; ಯಾವ ದಿನಾಂಕದಂದು ಮಾಡಿದೆ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು; | ಐಪಿಎಸ್ ಅಧಿಕಾರಿಗಳ ವಿರುದ್ಧ ತನಿಖಾ ಸಂಸ್ಥೆಯ ಕೋರಿಕೆಯಂತೆ, ಅಭಿಯೋಜನಾ ಮಂಜೂರಾತಿಯನ್ನು ನೀಡಲಾಗಿದೆ. ಸಂಸ್ಥೆಯ ಶಿಫಾರಸಿನಂತೆ ಇಲಾಖಾ ವಿಚಾರಣೆಗಳು ಪ್ರಗತಿಯಲ್ಲಿವೆ. |
| ಈ) | ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲಿನ ಆರೋಪದ ಕುರಿತು ಯು.ಪಿ.ಎಸ್ಸಿ ಮತ್ತು ಕೇಂದ್ರ ಗೃಹ ಇಲಾಖೆಗೆ ಪತ್ರ ಬರೆಯಲಾಗಿದೆಯೇ; ಯಾವ ದಿನಾಂಕದಂದು ಪತ್ರ ಬರೆಯಲಾಗಿದೆ; ಭ್ರಷ್ಟ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ನಿಯಮ ಕುರಿತು ಸರ್ಕಾರ ಕೈಗೊಂಡ | ಆರೋಪದ ಬಗ್ಗೆ ವಿಚಾರಣೆಗಳು ಪ್ರಗತಿಯಲ್ಲಿದ್ದು, ಪ್ರಕರಣದಲ್ಲಿನ ಅಂತಿಮ ತೀರ್ಪಿನ ನಂತರ ಮುಂದಿನ ಕ್ರಮ ಕೈಗೊಳ್ಳಬೇಕಾಗುತ್ತದೆ. |

| | ಕ್ರಮಗಳೇನು? (ವಿವರ ನೀಡುವುದು) | |
|---|---|---|

ಸಂಖ್ಯೆ: ಇ-ಸಿಆಸುಇ 388 ಎಸ್‌ಪಿಎಸ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ